A CSR initiative by

**Honeywell**

Implemented by

ICTACADEMY

Inauguration of

# CENTER OF EXCELLENCE FOR WOMEN EMPOWERMENT

**23 Oct 2021**
10:30 am onwards

Hosted by

**BAPUJI INSTITUTE OF ENGINEERING AND TECHNOLOGY**
DAVANGERE

## INAUGURAL SPEAKERS



**Ashish Gaikwad**
President
Honeywell India



**Suresh Babu L**
Head- Corporate & Government Initiatives, ICT Academy



**Dr Prabha Mallikarjuna**
Governing Council Member
Bapuji Educational Association [BEA]



**Prof Y Vrushabhendrappa**
Director, Bapuji Institute of Engineering and Technology



**Dr HB Aravind**
Principal, Bapuji Institute of Engineering and Technology



**Dr Nirmala CR**
HOD - Computer Science and Engineering
Bapuji Institute of Engineering and Technology



**Dr Chetana Prakash**
Professor - Computer Science and Engineering
Bapuji Institute of Engineering and Technology

www.ictacademy.in/honeywell

# ಬಿಐಇಟಿಯಲ್ಲಿಂದು

Nagaravani 23-10-2021

ದಾವಣಗೆರೆ: ಹನಿವೆಲ್ ವತಿಯಿಂದ ನಗರದ ಬಿಐಇಟಿ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ ಅ.23ರ ಇಂದು ಬೆಳಿಗ್ಗೆ 10 ಗಂಟೆಗೆ 'ಮಹಿಳಾ ಸಬಲೀಕರಣದ ನೈಪುಣ್ಯತ ಕೇಂದ್ರದ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಹನಿವೆಲ್ ಸಂಸ್ಥೆಯ ಅಧ್ಯಕ್ಷ ಆಶಿಶ್ ಘಾಯಕ್‌ವಾಡ್, ಐಸಿಟಿ ಅಕಾಡೆಮಿಯ ಎಲ್. ಸುರೇಶ್ ಬಾಬು, ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ್, ಪ್ರೊ. ವೈ. ವೃಷಭೇಂದ್ರಪ್ಪ, ಬಿಐಇಟಿ ಕಾಲೇಜಿನ ಪ್ರಾಂಶುಪಾಲ ಡಾ. ಹೆಚ್.ಬಿ. ಅರವಿಂದ್, ಕಾಲೇಜಿನ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥೆ ಡಾ. ಸಿ.ಆರ್. ನಿರ್ಮಲ, ಪ್ರೊ. ಡಾ. ಚೇತನಾ ಪ್ರಕಾಶ್ ಪಾಲ್ಗೊಳ್ಳಲಿದ್ದಾರೆ.

Udayavani 25-10-2021

### ಸಾಧನೆಯ ದೃಢಸಂಕಲ್ಪದಿಂದ ಮುನ್ನಡೆದರೆ ಯಶಸ್ಸು ನಿಶ್ಚಿತ: ಡಾ। ಪ್ರಭಾ ಮಲ್ಲಿಕಾರ್ಜುನ್

# ಮಹಿಳಾ ಸಬಲೀಕರಣದಲ್ಲಿ ಶಿಕ್ಷಣದ ಪಾತ್ರ ಮುಖ್ಯ

**ದಾವಣಗೆರೆ:** ಮಹಿಳೆಯರ ಸಮಗ್ರ ಅಭಿವೃದ್ಧಿಯಲ್ಲಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಅದರ ಜತೆಗೆ ಸ್ವಯಂ ವಿಶ್ಲೇಷಣೆಗೆ ಒಳಪಟ್ಟು ಆತ್ಮಸ್ಥೈರ್ಯದಿಂದ ಉದ್ಯೋಗಕ್ಕೆ ಬೇಕಾದ ಕೌಶಲ್ಯ ಪಡೆದುಕೊಂಡು ಸಾಧನೆಯತ್ತ ಗಮನ ಹರಿಸಬೇಕು ಎಂದು ಎಂದು ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯೆ ಡಾ। ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿ ಸಹಯೋಗದಲ್ಲಿ ನಗರದ ಬಾಪೂಜಿ ಎಂಜಿನಿಯರಿಂಗ್ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಮಹಿಳೆಯರು ಸಾಧನೆಯ ಸಂಕಲ್ಪ ತೊಟ್ಟು ಆತ್ಮವಿಶ್ವಾಸದಿಂದ ಹೆಜ್ಜೆ ಹಾಕಿದಾಗ ಮಾತ್ರ ಮಹಿಳಾ ಸಬಲೀಕರಣ ಸಾಧ್ಯ. ಯೋಗ, ಧ್ಯಾನ, ಪ್ರಾಣಾಯಾಮಗಳನ್ನು ಮಾಡುವ ಮೂಲಕ ದೈಹಿಕ ಮತ್ತು ಮಾನಸಿಕ ಸಮತೋಲನ ಕಾಪಾಡಿಕೊಂಡು ಸಾಧನೆಗೆ ಮುಂದಾಗಬೇಕು ಎಂದರು.

ಪ್ರಭಾರಿ ಪ್ರಾಂಶುಪಾಲ ಕೆ.ಎಸ್. ಬಸವರಾಜಪ್ಪ ಮಾತನಾಡಿ, ಮಹಿಳಾ ಸಬಲೀಕರಣಕ್ಕೆ ಶಿಕ್ಷಣ ಅತ್ಯಂತ ಪ್ರಮುಖವಾಗಿರುವ ಅಸ್ತ್ರ. ಪ್ರತಿ ಮಹಿಳೆ ಶಿಕ್ಷಣ ಪಡೆದುಕೊಂಡಾಗ ಮಾತ್ರ ಆಕೆ ಆರ್ಥಿಕ ಸ್ವಾವಲಂಬನೆಗೆ ಸಹಾಯವಾಗಲಿದೆ. ವಿದ್ಯಾವಂತ ಮಹಿಳೆ ಕೇವಲ ಕುಟುಂಬದ ಏಳಿಗೆಗೆ ಮಾತ್ರವಲ್ಲ, ದೇಶದ ಅಭಿವೃದ್ಧಿಗೂ ಸಹಕಾರಿಯಾಗಬಲ್ಲಳು. ಇಪ್ಪತ್ತು ವರ್ಷಗಳ ಹಿಂದೆ ಶಿಕ್ಷಣ ಪಡೆಯುತ್ತಿದ್ದ ಹೆಣ್ಣುಮಕ್ಕಳ ಸಂಖ್ಯೆ ಪುರುಷರಿಗಿಂತ ಸಾಕಷ್ಟು ಕಡಿಮೆಯಿತ್ತು. ಆದರೆ ಈಗ ಎರಡು ಪಟ್ಟು ಹೆಚ್ಚಳವಾಗಿದೆ. ಶಿಕ್ಷಣದ ಬಗ್ಗೆ ಜಾಗೃತಿ ಮೂಡಿದಷ್ಟು ಮಹಿಳಾ ಸಬಲೀಕರಣ ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಐಸಿಟಿ ಅಕಾಡೆಮಿ ಮುಖ್ಯಸ್ಥ ಎಲ್. ಸುರೇಶ್‌ಬಾಬು ಮಾತನಾಡಿ, ಪ್ರಸ್ತುತ ಮಹಿಳಾ ಸಬಲೀಕರಣ ಅತ್ಯಂತ ಆವಶ್ಯಕ. ಮಹಿಳೆಯರ ಜ್ಞಾನ, ಸಹಕಾರವನ್ನು ಬಳಸಿಕೊಳ್ಳುವ ಮೂಲಕ ದೇಶದ ಅಭಿವೃದ್ಧಿಗೆ ಮುಂದಾಗಬೇಕು. ಈ ನಿಟ್ಟಿನಲ್ಲಿ ಐಸಿಟಿ ಕಳೆದ 12 ವರ್ಷಗಳಿಂದ 700ಕ್ಕೂ ಅಧಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸುಮಾರು 20 ಸಾವಿರಕ್ಕೂ ಅಧಿಕ ಮಹಿಳೆಯರಿಗೆ ಉದ್ಯೋಗ ನೀಡಿ ಮಹಿಳೆಯರ ಸ್ವಾಯತ್ತತೆಗೆ ಶ್ರಮಿಸುತ್ತಿದೆ ಎಂದರು.

ಹನಿವೆಲ್ ಇಂಡಿಯಾದ ಅಧ್ಯಕ್ಷ ಆಶಿಶ್ ಗಾಯಕ್ವಾಡ್ ವಿಡಿಯೋ ಮೂಲಕ ಮಾತನಾಡಿ, ಹನಿವೆಲ್ ಸಂಸ್ಥೆಯು ಯುವ ಪೀಳಿಗೆಗೆ ವಿಶೇಷ ಕೌಶಲ್ಯ ಕಾರ್ಯಕ್ರಮಗಳನ್ನು ನೀಡುವ ಮೂಲಕ ಸರಿಯಾದ ಜ್ಞಾನ ನೀಡಲು ಬದ್ಧವಾಗಿದೆ. ತಂತ್ರಜ್ಞಾನದ ಕಾರ್ಯಕ್ರಮಗಳು ಕೈಗೆಟುಕುವಂತಿವೆ ಎಂದು ತಿಳಿಸಿದರು.

ಕಾಲೇಜಿನ ಕಂಪ್ಯೂಟರ್ ಸೈನ್ಸ್ ಆ್ಯಂಡ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥೆ ಡಾ। ಸಿ.ಆರ್. ನಿರ್ಮಲಾ ಪ್ರಾಸ್ತಾವಿಕವಾಗಿ ಮಾತನಾಡಿದರು, ಬಿಐಇಟಿ ಕಾಲೇಜು ನಿರ್ದೇಶಕ ಪ್ರೊ। ವೈ. ವೃಷಭೇಂದ್ರಪ್ಪ ಪ್ರಭಾರಿ ಪ್ರಾಂಶುಪಾಲ ಡಾ। ಎಚ್.ಬಿ. ಅರವಿಂದ್, ವಿಷ್ಣುಪ್ರಸಾದ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಪ್ರೊ। ಸುಮನ್ ಸ್ವಾಗತಿಸಿದರು. ಪ್ರೊ। ಎಂ. ವರ್ಷಾ ಅತಿಥಿಗಳನ್ನು ಪರಿಚಯಿಸಿದರು. ಪ್ರೊ। ಶಿಲ್ಪ ನಿರೂಪಿಸಿದರು.




ದಾವಣಗೆರೆ: ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರವನ್ನು ಡಾ। ಪ್ರಭಾ ಮಲ್ಲಿಕಾರ್ಜುನ್ ಹಾಗೂ ಗಣ್ಯರು ಉದ್ಘಾಟಿಸಿದರು.

# ಶಿಕ್ಷಣ ಮತ್ತು ಆತ್ಮವಿಶ್ವಾಸದಿಂದ ಮಹಿಳಾ ಸಬಲೀಕರಣ ಸಾಧ್ಯ : ಪ್ರಭಾ ಮಲ್ಲಿಕಾರ್ಜುನ್




ದಾವಣಗೆರೆ: ಅ.23: ಮಹಿಳೆಯರು ಸಾಧನೆಯ ಸಂಕಲ್ಪ ತೊಟ್ಟು, ಆತ್ಮವಿಶ್ವಾಸದಿಂದ ಹೆಜ್ಜೆ ಹಾಕಿದಾಗ ಮಾತ್ರ ಮಹಿಳಾ ಸಬಲೀಕರಣ ಸಾಧ್ಯವಾಗಲಿದೆ ಎಂದು ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿ ಇವರ ಸಹಯೋಗದಲ್ಲಿ ನಗರದ ಬಾಪೂಜಿ ಇಂಜಿನಿಯರಿಂಗ್ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರ'ದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಿಳೆಯರು ಅಭಿವೃದ್ಧಿ ಹೊಂದಲು ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಅದರ ಜತೆಗೆ ಸ್ವಯಂ ವಿಶ್ಲೇಷಣೆಗೆ ಒಳಪಟ್ಟು, ನಿಮಗೆ ನೀವೆ ಆತ್ಮಸ್ಥೈರ್ಯ ತುಂಬಿಕೊಂಡು, ಉದ್ಯೋಗಕ್ಕೆ ಬೇಕಾದ ಕೌಶಲ್ಯಗಳನ್ನು ಪಡೆದು-ಕೊಂಡರೆ ಸಾಧನೆ ಸಾಧ್ಯವಾಗಲಿದೆ ಎಂದು ಸಲಹೆ ನೀಡಿದರು.

ಧ್ಯಾನ ನಿಮ್ಮ ಮನಸ್ಸನ್ನು ಕೇಂದ್ರೀಕರಿಸಲು ಸಹಾಯ ಮಾಡುತ್ತದೆ. ಯೋಗ, ಧ್ಯಾನ, ಪ್ರಾಣಾಯಾಮಗಳನ್ನು ಮಾಡುವ ಮೂಲಕ ದೈಹಿಕ ಮತ್ತು ಮಾನಸಿಕ ಸಮತೋಲನ ಕಾಪಾಡಿಕೊಂಡು, ಸಾಧನೆಗೆ ಮುಂದಾಗಿ ಎಂದು ಕರೆ ನೀಡಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿಯಿಂದ ಸ್ಥಾಪಿಸಲಾಗು ತ್ತಿರುವ ಮಹಿಳಾ ಸಬಲೀಕರಣ ನೈಪುಣ್ಯತಾ ಕೇಂದ್ರವು ವಿದ್ಯಾರ್ಥಿಗಳಿಗೆ ಕೌಶಲ್ಯ ಪಡೆಯಲು ಅನುಕೂಲವಾಗಲಿದ್ದು, ಕೌಶಲ್ಯ ತರಬೇತಿ ಕಾರ್ಯಕ್ರಮದ ಕೊನೆಯಲ್ಲಿ ಉದ್ಯೋಗದ ಸಹಾಯ ನೀಡುತ್ತಿರುವುದು ಅಭಿನಂದನಾರ್ಹವಾಗಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗಪಡಿಸಿಕೊಳ್ಳಿ ಎಂದು ತಿಳಿಸಿದರು.

ಪ್ರಭಾರ ಪ್ರಾಂಶುಪಾಲ ಕೆ.ಎಸ್. ಬಸವರಾಜಪ್ಪ ಮಾತನಾಡಿ, ಮಹಿಳಾ ಸಬಲೀಕರಣಕ್ಕೆ ಶಿಕ್ಷಣ ಅತ್ಯಂತ ಪ್ರಮುಖವಾಗಿರುವ ಅಸ್ತ್ರ ಎನ್ನಬಹುದು. ಪ್ರತಿ ಮಹಿಳೆಯೂ ಶಿಕ್ಷಣ ಪಡೆದುಕೊಂಡಾಗ ಮಾತ್ರ ಆಕೆ ಆರ್ಥಿಕ ಸ್ವಾವಲಂಬಿತನ, ಬೆಳವಣಿಗೆಗೆ ಸಹಾಯವಾಗಲಿದೆ ಎಂದು ಹೇಳಿದರು.

ಶಿಕ್ಷಿತ ಮಹಿಳೆ ಕೇವಲ ಕುಟುಂಬದ ಏಳಿಗೆಗೆ ಮಾತ್ರವಲ್ಲ, ದೇಶದ ಅಭಿವೃದ್ಧಿಗೂ ಸಹಕಾರಿಯಾಗಬಲ್ಲಳು. ಈಗ್ಗೆ ಇಪ್ಪತ್ತು ವರ್ಷಗಳ ಹಿಂದೆ ಶಿಕ್ಷಣ ಪಡೆಯುತ್ತಿದ್ದ ಹೆಣ್ಣುಮಕ್ಕಳ ಸಂಖ್ಯೆ ಪುರುಷರಿಗಿಂತ ಸಾಕಷ್ಟು ಕಡಿಮೆಯಿತ್ತು. ಆದರೆ, ಈಗ ಎರಡು ಪಟ್ಟು ಹೆಚ್ಚಳವಾಗಿದೆ. ಶಿಕ್ಷಣದ ಬಗ್ಗೆ ಜಾಗೃತಿ ಮೂಡಿದಷ್ಟು ಮಹಿಳಾ ಸಬಲೀಕರಣ ಸಾಧ್ಯವಾಗಲಿದೆ ಎಂದು ಅಭಿಪ್ರಾಯಿಸಿದರು.

(3ನೇ ಪುಟಕ್ಕೆ)

Nagaravani 24-10-2021

# ಶಿಕ್ಷಣ ಮತ್ತು ಆತ್ಮವಿಶ್ವಾಸದಿಂದ...

(1ನೇ ಪುಟದಿಂದ) ಐಸಿಟಿ ಅಕಾಡೆಮಿ ಮುಖ್ಯಸ್ಥ ಎಲ್. ಸುರೇಶ್ ಬಾಬು ಮಾತನಾಡಿ, ಪ್ರಸ್ತುತ ಮಹಿಳಾ ಸಬಲೀಕರಣ ಅತ್ಯಂತ ಅವಶ್ಯಕವಾಗಿದ್ದು, ಮಹಿಳೆಯರ ಜ್ಞಾನ, ಸಹಕಾರವನ್ನು ಬಳಸಿಕೊಳ್ಳುವ ಮೂಲಕ ದೇಶವನ್ನು ಅಭಿವೃದ್ಧಿಗೊಳಿಸಲು ಮುಂದಾಗಬೇಕಿದೆ. ಆ ನಿಟ್ಟಿನಲ್ಲಿ ಐಸಿಟಿ ಕಳೆದ 12 ವರ್ಷಗಳಿಂದ 700 ಕ್ಕೂ ಅಧಿಕ ಕಾರ್ಯಕ್ರಮಗಳನ್ನು ನೀಡಿ, ಸುಮಾರು 20 ಸಾವಿರಕ್ಕೂ ಅಧಿಕ ಮಹಿಳೆಯರಿಗೆ ಉದ್ಯೋಗ ನೀಡಿ ಮಹಿಳೆಯರ ಸ್ವಾಯತ್ತತೆಗೆ ಶ್ರಮಿಸುತ್ತಿದೆ ಎಂದು ಹೇಳಿದರು.

ಹನಿವೆಲ್ ಇಂಡಿಯಾದ ಅಧ್ಯಕ್ಷ ಆಶಿಶ್ ಗಾಯಕ್ವಾಡ್ ವೀಡಿಯೋ ಮೂಲಕ ಮಾತನಾಡಿ, ಹನಿವೆಲ್ ಸಂಸ್ಥೆಯು ಯುವ ಪೀಳಿಗೆಗೆ ವಿಶೇಷ ಕೌಶಲ್ಯ ಕಾರ್ಯಕ್ರಮಗಳನ್ನು ನೀಡುವ ಮೂಲಕ ಸರಿಯಾದ ಜ್ಞಾನ ನೀಡಲು ಬದ್ಧವಾಗಿದ್ದು, ಈ ತಂತ್ರಜ್ಞಾನದ ಕಾರ್ಯಕ್ರಮಗಳು ಕೈಗೆಟುಕುವಂತಿದ್ದು, ಸಮಾಜದ ಎಲ್ಲ ವರ್ಗದವರಿಗೂ ಲಭ್ಯವಾಗುವ ಜತೆಗೆ ಉತ್ತಮ ವೃತ್ತಿಜೀವನ ನಿರ್ಮಿಸಲು ಅವಕಾಶವಾಗಬೇಕು ಎಂಬ ಉದ್ದೇಶದಿಂದ ನಮ್ಮ ಸಂಸ್ಥೆ ಎಲ್ಲರಿಗೂ ಉತ್ತಮ ಗುಣಮಟ್ಟದ ಕೌಶಲ ಶಿಕ್ಷಣ ನೀಡುತ್ತಿದೆ ಎಂದರು.

ಕಾಲೇಜಿನ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥೆ ಡಾ. ಸಿ.ಆರ್. ನಿರ್ಮಲ ಪ್ರಾಸ್ತಾವಿಕ ನುಡಿದರು, ಬಿಐಇಟಿ ಕಾಲೇಜು ನಿರ್ದೇಶಕ ಪ್ರೊ. ವೈ.ವೃಷಭೇಂದ್ರಪ್ಪ, ಪ್ರಾಂಶುಪಾಲ ಡಾ|| ಹೆಚ್.ಬಿ. ಅರವಿಂದ್, ಪ್ರಾಂಶುಪಾಲ ಡಾ|| ಹೆಚ್ ಬಿ ಅರವಿಂದ್, ವಿಷ್ಣುಪ್ರಸಾದ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರೊ. ಸುಮನ್ ಸ್ವಾಗತಿಸಿದರು, ಸಹಾಯಕ ಪ್ರಾಧ್ಯಾಪಕಿ ಪ್ರೊ. ಎಂ. ವರ್ಷಾ ಅತಿಥಿಗಳನ್ನು ಪರಿಚಯಿಸಿದರು, ಪ್ರೊ. ಶಿಲ್ಪ ನಿರೂಪಿಸಿದರು. ಮೇಘ ಮತ್ತು ನೇಹ ಪ್ರಾರ್ಥಿಸಿದರು.

Nagaravani 24-10-2021

## ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ

# ಆತ್ಮವಿಶ್ವಾಸದಿಂದ ಮಹಿಳಾ ಸಬಲೀಕರಣ

ಪ್ರಜಾವಾಣಿ ವಾರ್ತೆ

ದಾವಣಗೆರೆ: ಸಾಧನೆಯ ಸಂಕಲ್ಪತೊಟ್ಟು ಆತ್ಮವಿಶ್ವಾಸದಿಂದ ಹೆಜ್ಜೆ ಹಾಕಿದಾಗ ಮಹಿಳಾ ಸಬಲೀಕರಣ ಸಾಧ್ಯ ಎಂದು ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ ಹೇಳಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿ ಸಹಯೋಗದಲ್ಲಿ ನಗರದ ಬಾಪೂಜಿ ಎಂಜಿನಿಯರಿಂಗ್ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 'ಮಹಿಳಾ ಸಬಲೀಕರಣದ ನೈಪುಣ್ಯ ಕೇಂದ್ರ'ದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಿಳೆಯರು ಅಭಿವೃದ್ಧಿ ಹೊಂದಲು ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಜತೆಗೆ ಸ್ವಯಂ ವಿಶ್ಲೇಷಣೆಗೆ ಒಳಪಟ್ಟು, ಆತ್ಮಸ್ಥೈರ್ಯದಿಂದ ಉದ್ಯೋಗಕ್ಕೆ ಬೇಕಾದ ಕೌಶಲಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿಯಿಂದ ಸ್ಥಾಪಿಸಲಾಗುತ್ತಿರುವ ಮಹಿಳಾ ಸಬಲೀಕರಣ ನೈಪುಣ್ಯ ಕೇಂದ್ರವು ವಿದ್ಯಾರ್ಥಿಗಳಿಗೆ ಕೌಶಲ ಪಡೆಯಲು ಅನುಕೂಲವಾಗಲಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.



ಹನಿವೆಲ್ ಮತ್ತು ಐಸಿಟಿ ಅಕಾಡೆಮಿ ಸಹಯೋಗದಲ್ಲಿ ದಾವಣಗೆರೆ ಬಾಪೂಜಿ ಎಂಜಿನಿಯರಿಂಗ್ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ 'ಮಹಿಳಾ ಸಬಲೀಕರಣದ ನೈಪುಣ್ಯ ಕೇಂದ್ರ'ದ ಉದ್ಘಾಟನಾ ಕಾರ್ಯಕ್ರಮ ಶನಿವಾರ ನಡೆಯಿತು

ಪ್ರಭಾರ ಪ್ರಾಂಶುಪಾಲ ಕೆ.ಎಸ್. ಬಸವರಾಜಪ್ಪ, 'ಶಿಕ್ಷಣ ಪಡೆದ ಮಹಿಳೆ ಕುಟುಂಬದ ಏಳಿಗೆಗೆ ಮಾತ್ರವಲ್ಲ, ದೇಶದ ಅಭಿವೃದ್ಧಿಗೂ ಸಹಕಾರಿಯಾಗಬಲ್ಲಳು. ಇಪತ್ತು ವರ್ಷಗಳ ಹಿಂದೆ ಶಿಕ್ಷಣ ಪಡೆಯುತ್ತಿದ್ದ ಹೆಣ್ಣುಮಕ್ಕಳ ಸಂಖ್ಯೆ ಪುರುಷರಿಗಿಂತ ಬಹಳ ಕಡಿಮೆಯಿತ್ತು. ಈಗ ಎರಡು ಪಟ್ಟು ಹೆಚ್ಚಳವಾಗಿದೆ' ಎಂದು ಅಭಿಪ್ರಾಯಿಸಿದರು.

ಐಸಿಟಿ ಅಕಾಡೆಮಿ ಮುಖ್ಯಸ್ಥ ಎಲ್. ಸುರೇಶ್ ಬಾಬು, 'ಮಹಿಳೆಯರು ಜ್ಞಾನ, ಸಹಕಾರವನ್ನು ಬಳಸಿಕೊಳ್ಳುವ ಮೂಲಕ ದೇಶದ ಅಭಿವೃದ್ಧಿಗೊಳಿಸಲು ಮುಂದಾಗಬೇಕಿದೆ. ಆ ನಿಟ್ಟಿನಲ್ಲಿ ಐಸಿಟಿ 12 ವರ್ಷಗಳಲ್ಲಿ 700ಕ್ಕೂ ಅಧಿಕ ಕಾರ್ಯಕ್ರಮಗಳನ್ನು ನೀಡಿದೆ. 20 ಸಾವಿರಕ್ಕೂ ಅಧಿಕ ಮಹಿಳೆಯರಿಗೆ ಉದ್ಯೋಗ ನೀಡಿ ಮಹಿಳೆಯರ ಸ್ವಾಯತ್ತಕ್ಕೆ ಶ್ರಮಿಸುತ್ತಿದೆ' ಎಂದು ಹೇಳಿದರು.

ಹನಿವೆಲ್ ಇಂಡಿಯಾದ ಅಧ್ಯಕ್ಷ ಆಶಿಶ್ ಗಾಯಕ್ವಾಡ್ ವಿಡಿಯೊ ಮೂಲಕ ಮಾತನಾಡಿ, 'ಹನಿವೆಲ್ ಸಂಸ್ಥೆಯು ಯುವ ಪೀಳಿಗೆಗೆ ವಿಶೇಷ ಕೌಶಲ ಕಾರ್ಯಕ್ರಮಗಳನ್ನು ನೀಡುತ್ತಿದೆ. ತಂತ್ರಜ್ಞಾನದ ಕಾರ್ಯಕ್ರಮಗಳು ಕೈಗೆಟುಕುವಂತಿದ್ದು, ಸಮಾಜದ ಎಲ್ಲ ವರ್ಗದವರಿಗೂ ಲಭ್ಯವಾಗಬೇಕು. ಜತೆಗೆ ಉತ್ತಮ ವೃತ್ತಿಜೀವನ ನಿರ್ಮಿಸಲು ಅವಕಾಶವಾಗಬೇಕು ಎಂಬ ಉದ್ದೇಶದಿಂದ ನಮ್ಮ ಸಂಸ್ಥೆ ಎಲ್ಲರಿಗೂ ಉತ್ತಮ ಗುಣಮಟ್ಟದ ಕೌಶಲ ಶಿಕ್ಷಣ ನೀಡುತ್ತಿದೆ' ಎಂದರು.

ಕಾಲೇಜಿನ ಕಂಪ್ಯೂಟರ್ ಸೈನ್ಸ್ ಆ್ಯಂಡ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಸಿ.ಆರ್. ನಿರ್ಮಲ ಪ್ರಾಸ್ತಾವಿಕ ನುಡಿದರು. ಬಿಐಇಟಿ ಕಾಲೇಜು ನಿರ್ದೇಶಕ ಪ್ರೊ. ವೈ.ವೃಷಭೇಂದ್ರಪ್ಪ, ವಿಷ್ಣುಪ್ರಸಾದ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪ್ರೊ. ಸುಮನ್ ಸ್ವಾಗತಿಸಿದರು. ಸಹಾಯಕ ಪ್ರಾಧ್ಯಾಪಕಿ ಪ್ರೊ. ಎಂ. ವರ್ಷಾ ಅತಿಥಿಗಳನ್ನು ಪರಿಚಯಿಸಿದರು. ಪ್ರೊ. ಶಿಲ್ಪ ನಿರೂಪಿಸಿದರು. ಮೇಘ ಮತ್ತು ನೇಹ ಪ್ರಾರ್ಥಿಸಿದರು.

25-10-2021 ಜನತಾವಾಣಿ

B.I.E.T, LIBRARY



# ಆತ್ಮವಿಶ್ವಾಸದಿಂದ ಮಹಿಳಾ ಸಬಲೀಕರಣ: ಡಾ.ಪ್ರಭಾ

ದಾವಣಗೆರೆ, ಅ.23- ಮಹಿಳೆಯರು ಸಾಧನೆಯ ಸಂಕಲ್ಪ ತೊಟ್ಟು ಆತ್ಮವಿಶ್ವಾಸದಿಂದ ಹೆಜ್ಜೆ ಹಾಕಿದಾಗ ಮಾತ್ರ ಮಹಿಳಾ ಸಬಲೀಕರಣ ಸಾಧ್ಯವಾಗಲಿದೆ ಎಂದು ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿ ಇವರ ಸಹಯೋಗದಲ್ಲಿ ನಗರದ ಬಾಪೂಜಿ ಇಂಜಿನಿಯರಿಂಗ್ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ 'ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರ'ದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಿಳೆಯರು ಅಭಿವೃದ್ಧಿ ಹೊಂದುವಲ್ಲಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಅದರ ಜತೆಗೆ ಸ್ವಯಂ ವಿಶ್ಲೇಷಣೆಗೆ ಒಳಪಟ್ಟು, ಆತ್ಮಸ್ಥೈರ್ಯದಿಂದ ಉದ್ಯೋಗಕ್ಕೆ ಬೇಕಾದ ಕೌಶಲ್ಯಗಳನ್ನು ಪಡೆದುಕೊಂಡು ಸಾಧನೆಯತ್ತ ಗಮನಹರಿಸಿ ಎಂದು ಸಲಹೆ ನೀಡಿದರು.

ಧ್ಯಾನ ನಿಮ್ಮ ಮನಸ್ಸನ್ನು ಕೇಂದ್ರೀಕರಿಸಲು ಸಹಾಯ ಮಾಡುತ್ತದೆ. ಯೋಗ, ಧ್ಯಾನ, ಪ್ರಾಣಾಯಾಮಗಳನ್ನು ಮಾಡುವ ಮೂಲಕ ದೈಹಿಕ ಮತ್ತು ಮಾನಸಿಕ ಸಮತೋಲನ ಕಾಪಾಡಿಕೊಂಡು ಸಾಧನೆಗೆ ಮುಂದಾಗಿ ಎಂದು ಕರೆ ನೀಡಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿಯಿಂದ ಸ್ಥಾಪಿಸಲಾಗುತ್ತಿರುವ ಮಹಿಳಾ ಸಬಲೀಕರಣ



ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರದ ಉದ್ಘಾಟನೆ

ನೈಪುಣ್ಯತಾ ಕೇಂದ್ರವು ವಿದ್ಯಾರ್ಥಿಗಳಿಗೆ ಕೌಶಲ್ಯ ಪಡೆಯಲು ಅನುಕೂಲವಾಗಲಿದ್ದು, ಕೌಶಲ್ಯ ತರಬೇತಿ ಕಾರ್ಯಕ್ರಮದ ಕೊನೆಯಲ್ಲಿ ಉದ್ಯೋಗದ ಸಹಾಯ ನೀಡುತ್ತಿರುವುದು ಅಭಿನಂದನಾರ್ಹವಾಗಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾಲೇಜಿನ ಪ್ರಭಾರ ಪ್ರಾಂಶುಪಾಲ ಕೆ. ಎಸ್. ಬಸವರಾಜಪ್ಪ ಮಾತನಾಡಿ, ಮಹಿಳಾ ಸಬಲೀಕರಣಕ್ಕೆ ಶಿಕ್ಷಣ ಅತ್ಯಂತ ಪ್ರಮುಖವಾಗಿರುವ ಅಸ್ತ್ರ ಎನ್ನಬಹುದು. ಪ್ರತಿ ಮಹಿಳೆ ಶಿಕ್ಷಣ ಪಡೆದುಕೊಂಡಾಗ ಮಾತ್ರ ಆಕೆ ಆರ್ಥಿಕ ಸ್ವಾವಲಂಬಿತನ, ಬೆಳವಣಿಗೆಗೆ ಸಹಾಯವಾಗಲಿದೆ ಎಂದು ಹೇಳಿದರು.

ಶಿಕ್ಷಿತ ಮಹಿಳೆ ಕೇವಲ ಕುಟುಂಬದ ಏಳಿಗೆಗೆ ಮಾತ್ರವಲ್ಲ, ದೇಶದ ಅಭಿವೃದ್ಧಿಗೂ ಸಹಕಾರಿಯಾಗಬಲ್ಲಳು. ಈಗ್ಗೆ ಇಪ್ಪತ್ತು ವರ್ಷಗಳ ಹಿಂದೆ ಶಿಕ್ಷಣ ಪಡೆಯುತ್ತಿದ್ದ ಹೆಣ್ಣುಮಕ್ಕಳ ಸಂಖ್ಯೆ ಪುರುಷರಿಗಿಂತ ಸಾಕಷ್ಟು ಕಡಿಮೆಯಿತ್ತು. ಆದರೆ ಈಗ ಎರಡು ಪಟ್ಟು ಹೆಚ್ಚಳವಾಗಿದೆ. ಶಿಕ್ಷಣದ ಬಗ್ಗೆ ಜಾಗೃತಿ ಮೂಡಿದಷ್ಟು ಮಹಿಳಾ ಸಬಲೀಕರಣ ಸಾಧ್ಯವಾಗಲಿದೆ ಎಂದು ಅಭಿಪ್ರಾಯಿಸಿದರು.

ಐಸಿಟಿ ಅಕಾಡೆಮಿ ಮುಖ್ಯಸ್ಥ ಎಲ್. ಸುರೇಶ್ ಬಾಬು ಮಾತನಾಡಿ, ಪ್ರಸ್ತುತ ಮಹಿಳಾ ಸಬಲೀಕರಣ ಅತ್ಯಂತ ಅವಶ್ಯಕವಾಗಿದ್ದು, ಮಹಿಳೆಯರ ಜ್ಞಾನ, ಸಹಕಾರವನ್ನು ಬಳಸಿಕೊಳ್ಳುವ ಮೂಲಕ ದೇಶದ ಅಭಿವೃದ್ಧಿಗೊಳಿಸಲು ಮುಂದಾಗಬೇಕಿದೆ. ಆ ನಿಟ್ಟಿನಲ್ಲಿ ಐಸಿಟಿ ಕಳೆದ 12 ವರ್ಷಗಳಿಂದ 700ಕ್ಕೂ ಅಧಿಕ ಕಾರ್ಯಕ್ರಮಗಳನ್ನು ನೀಡಿ, ಸುಮಾರು 20 ಸಾವಿರಕ್ಕೂ ಅಧಿಕ ಮಹಿಳೆಯರಿಗೆ ಉದ್ಯೋಗ ನೀಡಿ ಮಹಿಳೆಯರ ಸ್ವಾಯತ್ತತೆಗೆ ಶ್ರಮಿಸುತ್ತಿದೆ ಎಂದು ಹೇಳಿದರು.

ಹನಿವೆಲ್ ಇಂಡಿಯಾದ ಅಧ್ಯಕ್ಷ ಆಶಿಶ್ ಗಾಯಕ್‌ವಾಡ್ ವಿಡಿಯೋ ಮೂಲಕ ಮಾತನಾಡಿ, ಹನಿವೆಲ್ ಸಂಸ್ಥೆಯು ಯುವ ಪೀಳಿಗೆಗೆ ವಿಶೇಷ ಕೌಶಲ್ಯ ಕಾರ್ಯಕ್ರಮಗಳನ್ನು ನೀಡುವ ಮೂಲಕ ಸರಿಯಾದ ಜ್ಞಾನ ನೀಡಲು ಬದ್ಧವಾಗಿದ್ದು, ತಂತ್ರಜ್ಞಾನದ ಕಾರ್ಯಕ್ರಮಗಳು ಕೈಗೆಟುಕುವಂತಿದ್ದು, ಸಮಾಜದ ಎಲ್ಲ ವರ್ಗದವರಿಗೂ ಲಭ್ಯವಾಗುವ ಜತೆಗೆ ಉತ್ತಮ ವೃತ್ತಿ ಜೀವನ ನಿರ್ಮಿಸಲು ಅವಕಾಶವಾಗಬೇಕು ಎಂಬ ಉದ್ದೇಶದಿಂದ ನಮ್ಮ ಸಂಸ್ಥೆ ಎಲ್ಲರಿಗೂ ಉತ್ತಮ ಗುಣಮಟ್ಟದ ಕೌಶಲ್ಯ ಶಿಕ್ಷಣ ನೀಡುತ್ತಿವೆ ಎಂದರು.

ಕಾಲೇಜಿನ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಸಿ.ಆರ್. ನಿರ್ಮಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿಐಇಟಿ ಕಾಲೇಜು ನಿರ್ದೇಶಕ ಪ್ರೊ. ವೈ.ವೃಷಭೇಂದ್ರಪ್ಪ, ವಿಷ್ಣುಪ್ರಸಾದ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪ್ರೊ.ಸುಮನ್ ಸ್ವಾಗತಿಸಿದರು. ಸಹಾಯಕ ಪ್ರಾಧ್ಯಾಪಕರಾದ ಪ್ರೊ. ಎಂ. ವರ್ಷಾ ಅತಿಥಿಗಳನ್ನು ಪರಿಚಯಿಸಿದರು. ಪ್ರೊ. ಶಿಲ್ಪ ನಿರೂಪಿಸಿದರು. ಮೇಘ ಮತ್ತು ನೇಹ ಪ್ರಾರ್ಥಿಸಿದರು.

Vijayavani 24-10-2021

# ಆತ್ಮವಿಶ್ವಾಸವೇ ನಾರಿಯರ ಬಲ

## ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿಕೆ | ಸ್ತ್ರೀ ನೈಪುಣ್ಯತಾ ಕೇಂದ್ರ ಉದ್ಘಾಟನೆ



ದಾವಣಗೆರೆಯ ಬಿಐಇಟಿ ಕಾಲೇಜಿನಲ್ಲಿ ಶನಿವಾರ, 'ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರ'ವನ್ನು ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಿದರು. ಕಾಲೇಜು ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ, ಕೆ.ಎಸ್. ಬಸವರಾಜಪ್ಪ, ಐಸಿಟಿ ಅಕಾಡೆಮಿ ಮುಖ್ಯಸ್ಥ ಎಲ್. ಸುರೇಶ್ ಬಾಬು, ಡಾ. ಸಿ.ಆರ್. ನಿರ್ಮಲಾ, ವಿಷ್ಣುಪ್ರಸಾದ್ ಇದ್ದರು.

■ ವಿಜಯವಾಣಿ ಸುದ್ದಿಜಾಲ ದಾವಣಗೆರೆ

ಮಹಿಳೆಯರು ಸಾಧನೆಯ ಸಂಕಲ್ಪ ತೊಟ್ಟು ಆತ್ಮವಿಶ್ವಾಸದಿಂದ ಹೆಜ್ಜೆ ಹಾಕಿದಾಗ ಮಾತ್ರ ಮಹಿಳಾ ಸಬಲೀಕರಣ ಸಾಧ್ಯವಾಗಲಿದೆ ಎಂದು ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿ ಸಹಯೋಗದಲ್ಲಿ ನಗರದ ಬಾಪೂಜಿ ಇಂಜಿನಿಯರಿಂಗ್ ಕಾಲೇಜಿನ ಆರ್ಯಭಟ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಮಹಿಳಾ ಸಬಲೀಕರಣದ ನೈಪುಣ್ಯತಾ ಕೇಂದ್ರ'ದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಿಳೆಯರು ಅಭಿವೃದ್ಧಿ ಹೊಂದಲು ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಅದರ ಜತೆಗೆ ಸ್ವಯಂ ವಿಶ್ಲೇಷಣೆಗೆ ಒಳಪಟ್ಟು, ಆತ್ಮಸ್ಥೈರ್ಯದಿಂದ ಉದ್ಯೋಗಕ್ಕೆ ಬೇಕಾದ ಕೌಶಲಗಳನ್ನು ಬೆಳೆಸಿಕೊಂಡು ಸಾಧನೆಯತ್ತ ಗಮನಹರಿಸಿ ಎಂದು ಸಲಹೆ ನೀಡಿದರು.

ಧ್ಯಾನ ನಿಮ್ಮ ಮನಸ್ಸನ್ನು ಕೇಂದ್ರೀಕರಿಸಲು ಸಹಾಯ ಮಾಡುತ್ತದೆ. ಯೋಗ, ಧ್ಯಾನ, ಪ್ರಾಣಾಯಾಮಗಳನ್ನು ಮಾಡುವ ಮೂಲಕ ದೈಹಿಕ ಮತ್ತು ಮಾನಸಿಕ ಸಮತೋಲನ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಹನಿವೆಲ್ ಮತ್ತು ಐಸಿಟಿ ಅಕಾಡೆಮಿಯಿಂದ ಸ್ಥಾಪಿಸಲಾಗುತ್ತಿರುವ ಮಹಿಳಾ ಸಬಲೀಕರಣ ನೈಪುಣ್ಯತಾ ಕೇಂದ್ರವು ವಿದ್ಯಾರ್ಥಿಗಳಿಗೆ ಕೌಶಲ ಬೆಳೆಸಿಕೊಳ್ಳಲು ಅನುಕೂಲವಾಗಲಿದ್ದು, ಇದರ ಸದುಪಯೋಗ ಪಡಿಸಿಕೊಳ್ಳಿ ಎಂದು ತಿಳಿಸಿದರು. ಪ್ರಭಾರ ಪ್ರಾಂಶುಪಾಲ ಕೆ.ಎಸ್. ಬಸವರಾಜಪ್ಪ ಮಾತನಾಡಿ, ಮಹಿಳಾ ಸಬಲೀಕರಣಕ್ಕೆ ಶಿಕ್ಷಣ ಅತ್ಯಂತ ಪ್ರಮುಖವಾಗಿರುವ ಅಸ್ತ್ರವಾಗಿದೆ. ಶಿಕ್ಷಣ ಪಡೆದುಕೊಂಡಾಗ ಮಾತ್ರ ಆಕೆ ಆರ್ಥಿಕ ಸ್ವಾವಲಂಬನೆ, ಬೆಳವಣಿಗೆ ಹೊಂದಬಹುದು ಎಂದು ಹೇಳಿದರು.

ಐಸಿಟಿ ಅಕಾಡೆಮಿ ಮುಖ್ಯಸ್ಥ ಎಲ್. ಸುರೇಶ್ ಬಾಬು ಮಾತನಾಡಿ, ಪ್ರಸ್ತುತ ಮಹಿಳಾ ಸಬಲೀಕರಣ ಅತ್ಯಂತ ಅವಶ್ಯಕವಾಗಿದ್ದು, ಮಹಿಳೆಯರ ಜ್ಞಾನ, ಸಹಕಾರವನ್ನು ಬಳಸಿಕೊಳ್ಳುವ ಮೂಲಕ ದೇಶದ ಅಭಿವೃದ್ಧಿಗೊಳಿಸಲು ಮುಂದಾಗಬೇಕಿದೆ. ಆ ನಿಟ್ಟಿನಲ್ಲಿ ಐಸಿಟಿ ಕಳೆದ 12 ವರ್ಷಗಳಿಂದ 700 ಕ್ಕೂ ಅಧಿಕ ಕಾರ್ಯಕ್ರಮಗಳನ್ನು ನೀಡಿ, 20 ಸಾವಿರಕ್ಕೂ ಅಧಿಕ ಮಹಿಳೆಯರಿಗೆ ಉದ್ಯೋಗ ಒದಗಿಸಿದೆ ಎಂದು ತಿಳಿಸಿದರು.

ಹನಿವೆಲ್ ಇಂಡಿಯಾದ ಅಧ್ಯಕ್ಷ ಆಶಿಶ್ ಗಾಯಕ್ವಾಡ್ ಆನ್‌ಲೈನ್ ಮೂಲಕ ಮಾತನಾಡಿದರು. ಕಾಲೇಜಿನ ಕಂಪ್ಯೂಟರ್ ಸೈನ್ಸ್ ಆ್ಯಂಡ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥೆ ಡಾ. ಸಿ.ಆರ್. ನಿರ್ಮಲಾ ಪ್ರಾಸ್ತಾವಿಕ ನುಡಿದರು, ಕಾಲೇಜು ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ, ವಿಷ್ಣುಪ್ರಸಾದ್ ಇದ್ದರು.

ಪ್ರೊ. ಸುಮನ್ ಸ್ವಾಗತಿಸಿದರು. ಸಹಾಯಕ ಪ್ರಾಧ್ಯಾಪಕಿ ಪ್ರೊ. ಎಂ. ವರ್ಷಾ ಅತಿಥಿಗಳನ್ನು ಪರಿಚಯಿಸಿದರು. ಪ್ರೊ. ಶಿಲ್ಪಾ ನಿರೂಪಿಸಿದರು. ಮೇಘಾ ಮತ್ತು ನೇಹಾ ಪ್ರಾರ್ಥಿಸಿದರು.